**C.C.No.2845/2023**
**C.W-2**
**P.W-2**

**<u>ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ .ದಂ. ನ್ಯಾಯಾಲಯ ಕುಣಿಗಲ್</u>**

## ಸಿ.ಸಿ.2845/2023

| | |
|---|---|
| ಸಾಕ್ಷಿದಾರರ ಹೆಸರು | : ನಾಗಣ್ಣ |
| ತಂದೆಯ ಹೆಸರು | : ಲೇ ರಾಮಯ್ಯ |
| ವಯಸ್ಸು | : 52 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸ | : ಕಪನಿಪಾಳ್ಯ, ಕುಣಿಗಲ್ ತಾಲ್ಲೂಕು. |

**<u>ಸಾಕ್ಷಿಯನ್ನು ದಿನಾಂಕ:27.04.2026 ರಂದು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:</u>**

ಈ ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ.

**( ಈ ಹಂತರದಲ್ಲಿ ಮಾನ್ಯ ಸ. ಸ. ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ವಾಟೀ ಸವಾಲಿಗೆ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲುಃ ಮಾನ್ಯ ಸ.ಸ. ಅ ರವರಿಂದಃ</u>**

ದಿನಾಂಕ:18.09.2022 ರಂದು ಮಧ್ಯಾಹ್ನ 2.30 ರ ಸಮಯದಲ್ಲಿ ಕುಣಿಗಲ್ ನ ಕೊತ್ತಗೆರೆ ಹೋಬಳಿ, ಮಾವಿನಕಟ್ಟೆ ಗ್ರಾಮಕ್ಕೆ ಸೇರಿದ ಬೆಂಗಳೂರಿನ ವಾಸಿ ಬೆಟ್ಟಸ್ವಾಮಿ ರವರ ಜಮೀನಿನ ಮುಂಭಾಗದಲ್ಲಿ ಕುಣಿಗಲ್ ಕಡೆಯಿಂದ ನೀಲತ್ತಹಳ್ಳಿ ಕಡೆಗೆ ಹಾದು ಹೋಗಿರುವ ರಸ್ತೆಯಲ್ಲಿ ಆರೋಪಿ 2 ರವರು ನನ್ನ ತಮ್ಮ ಕೆ ಎ 06 ಹೆಚ್ ಕೆ 9220 ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ದ್ವಿಚಕ್ರ ವಾಹನದಲ್ಲಿ ಕಪನಿಪಾಳ್ಯಕ್ಕೆ ಹೋಗಲು ರಸ್ತೆಯ ಎಡಭಾಗದಲ್ಲಿ ಹೋಗುತ್ತಿರುವಾಗ ಕೆ.ಎ-35-ಎಲ್-

5308 ನೇ ಹೀರೋ ಹೋಂಡಾ ಪ್ಯಾಷನ್ ಪ್ಲಸ್ ದ್ವಿಚಕ್ರ ವಾಹನದ ಚಾಲಕ ತನ್ನ ವಾಹನವನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ವಾಹನ ಚಲಾಯಿಸಿ ನನ್ನ ತಮ್ಮನಿಗೆ ಡಿಕ್ಕಿಪಡಿಸಿದಾಗ, ಆ ಬೈಕ್ ಸವಾರ ಕೆಳಗೆ ಬಿದ್ದಾಗ, ನಾನು ಹೋಗಿ ಉಪಚರಿಸಿ ನೋಡಿದಾಗ, ಆತನ ಬಲಗಾಲಿಗೆ ತೀವ್ರವಾಗಿ ಪೆಟ್ಟಾಗಿತ್ತು, ಆತ ನಮ್ಮ ಊರಿನ 2ನೇ ಆರೋಪಿಯಾಗಿದ್ದ ಎಂದರೆ ಸರಿಯಲ್ಲ. ಸದರಿ ವಿಚಾರವನ್ನು ಚಾಸಾ.1 ರವರಿಗೆ ದೂರವಾಣಿ ಕರೆ ಮಾಡಿ ತಿಳಿಸಿದ್ದೆ ಎಂದರೆ ಸರಿಯಲ್ಲ. ಕೆ.ಎ-35-ಎಲ್-5308 ಬೈಕ್ ಅನ್ನು ಕಿರಣ್ ಎಂಬಾತ ಚಲಾಯಿಸುತ್ತಿದ್ದ ಎಂದರೆ ಸರಿಯಲ್ಲ. ಚಾಸಾ.1 ರವರ ತಮ್ಮನನ್ನು ಚಾಸಾ.1 ರವರು ಬಂದ ನಂತರ, ಕುಣಿಗಲ್ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಬೆಂಗಳೂರಿನ ಬಾಸ್ ಸ್ಪೆಷಾಲಿಟಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿದ್ದರು ಎಂದರೆ ಸರಿಯಲ್ಲ. ಘಟನೆಯ ಕುರಿತು ದಿನಾಂಕ 29.09.2022 ರಂದು ಪೊಲೀಸರಿಗೆ ಹೇಳಿಕೆ ನೀಡಿದ್ದೆ ಎಂದರೆ ಸರಿಯಲ್ಲ. ಹೇಳಿಕೆಯ ಭಾಗವನ್ನು ಸಾಕ್ಷಿಗೆ ಓದಿ ಹೇಳಲಾಗಿ ಸಾಕ್ಷಿಯು ಒಪ್ಪಿಕೊಳ್ಳದ ಕಾರಣ ಒಪ್ಪಿಕೊಳ್ಳದ ಹೇಳಿಕೆಯನ್ನು **ನಿಪಿ-5** ಎಂದು ಗುರುತಿಸಲಾಗಿದೆ. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ವಿಚಾರ ಗೊತ್ತಿದ್ದರೂ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

ಮರು ವಿಚಾರಣೆ ಇಲ್ಲ.

**( ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಹೇ.ಕೇ. ಸರಿ ಇದೆ .

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ .ದಂ .
ಕುಣಿಗಲ್